**ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿಸಿ.ನಂ.130/2012**

**ಸಿ.ಡಬ್ಲ್ಯೂ-3**

**ಪಿ.ಡಬ್ಲ್ಯೂ-3**

| | |
|---|---|
| ಸಾಕ್ಷಿಯ ಹೆಸರು | :ಸಂಜಯ ಕ್ಷತ್ರಿ |
| ತಂದೆ/ಗಂಡನ ಹೆಸರು | :ಅರ್ಜುನ |
| ವಯಸ್ಸು | : 38 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸಸ್ಥಳ | : ಲಾಳಸಂಗಿ |

**ದಿನಾಂಕ: 06-11-2024 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ**

ಚಾಸಾ 2 ನನ್ನ ತಮ್ಮ. ಈಗ್ಗೆ 12-13 ವರ್ಷಗಳ ಹಿಂದೆ ಪೊಲೀಸರು ನನ್ನನ್ನು ಪೊಲೀಸ ಠಾಣೆಗೆ ಕರೆದು ಒಂದು ದಾಖಲೆಯ ಮೇಲೆ ನನ್ನ ಸಹಿ ಪಡೆದಿರುತ್ತಾರೆ. ಆದರೆ ಅದರಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೋತ್ತಿಲ್ಲ. ಸಾಕ್ಷಿಯು ಸದರಿ ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದು ಪಂಚನಾಮೆ ಆಗಿದ್ದು ಅದನ್ನು ನಿ.ಪಿ. 3 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 3(ಎ) ಎಂದು ಗುರುತಿಸಲಾಯಿತು. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಕ್ಕೆ ಪಡೆದಿರುವುದಿಲ್ಲ. ಘಟನೆ ಕುರಿತು ಯಾವುದೇ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪಂಚನಾಮೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲು : ಮಾನ್ಯ ಸ.ಸ.ಅ. ರವರಿಂದ:**

ದಿನಾಂಕ 21.09.2011 ಹೊಳೆಸಂಖ ಗ್ರಾಮದ ಹಳೆ ಬಸ್ಸ ನಿಲ್ದಾಣದ ಹತ್ತಿರ ನಾನು ಹಾಗೂ ಪೊಲೀಸರೆಲ್ಲರು ಹೋಗಿ ಮರೆಯಲ್ಲಿ ವಾಚ್ ಮಾಡಲಾಗಿ ಇಬ್ಬರು ವ್ಯಕ್ತಿಗಳು ಮಧ್ಯ ಮಾರಾಟ ಮಾಡುತ್ತಿದ್ದುದನ್ನು ನೋಡಿ ಪೊಲೀಸರು ಆರೋಪಿಯನ್ನು ಹಿಡಿದು ಆತನ ಹತ್ತಿರ ಮಧ್ಯದ ಪೌಚಗಳನ್ನು ವಶಪಡಿಸಿಕೊಂಡು ಈ ಕುರಿತು ಬೆಳಿಗ್ಗೆ 11 ಗಂಟೆಯಿಂದ 12 ಗಂಟೆಯವರೆಗೆ ಪಂಚನಾಮೆಯನ್ನು ಮಾಡಿ ಓದಿ ಹೇಳಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ವೇಳೆಗೆ

ಮುದ್ದೆಮಾಲುಗಳನ್ನು ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಯು ಪರಿಚಯ ಇರುವ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**